ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ : ಸಂಖ್ಯೆ : ಸಿ5(2)ಪವ್ಯ.ಬ.79/2019-20 ದಿನಾಂಕ: 18-08-2021

## ಅಧಿಸೂಚನೆ

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು /ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ:1] ಸರ್ಕಾರದ ಆದೇಶ ಸಂಖ್ಯೆ:ಡಿಪಿಎಆರ್ 12 ಎಸ್‌ಡಿಇ 2005 ದಿ: 29-01-2008.

2] ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3] ದಿನಾಂಕ:26-07-2021 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4] ಈ ಕಛೇರಿಯ ಅಧಿಸೂಚನೆ ಪತ್ರದ ಸಮ ಸಂಖ್ಯೆ: ದಿನಾಂಕ: 26-07-2021.

5] ದಿನಾಂಕ: 18-08-2021 ರಂದು ನಡೆದ ಕೌನ್ಸಿಲಿಂಗ್.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಭೋದಕೇತರ) ವೃಂದದಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ, ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರು (ಭೋದಕೇತರ) ಹುದ್ದೆಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಭೋದಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ : 26-07-2021 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ಸಾರ್ವಜನಿಕ ಶಿಕ್ಷಣ ಇಲಾಖೆಯ ಗ್ರೂಪ್ "ಬಿ" ವೃಂದದ ವೇತನ ಶ್ರೇಣಿ ರೂ. 40900-78200 ರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಇವರಿಗೆ ಪತ್ರಾಂಕಿತ ಸಹಾಯಕ ಹುದ್ದೆಯ ವೇತನ ಶ್ರೇಣಿ ರೂ. 43100-83900 ರಂತೆ ಉಲ್ಲೇಖ [4] ರಲ್ಲಿ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ.

ಬಡ್ತಿ ಹೊಂದಿದ ಕೆಳಕಂಡ ಅಧಿಕಾರಿಗೆ ದಿನಾಂಕ: 18-08-2021 ರಂದು ಸ್ಥಳ ಆಯ್ಕೆಗಾಗಿ ಕೌನ್ಸಿಲಿಂಗ್ ನಡೆಸಲಾಗಿದೆ. ಅದರಂತೆ, ಬಡ್ತಿ ಹೊಂದಿದ ಅಧಿಕಾರಿಯು ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳವನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಈ ಅಧಿಕಾರಿಯು ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ, ಸ್ಥಳ ನಿಯುಕ್ತಿಗೊಳಿಸಿ ಆದೇಶವನ್ನು ಹೊರಡಿಸಿದೆ. ಬಡ್ತಿ ಹೊಂದಿದ ಅಧಿಕಾರಿಯು ಆಯ್ಕೆ ಮಾಡಿಕೊಂಡ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಪತ್ರಾಂಕಿತ ಸಹಾಯಕರು ಈ ಆದೇಶ ಜಾರಿಯಾದ 15 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ. ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

| ಕ್ರಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ಬಡ್ತಿ ಹೊಂದಿದ ಅಧಿಕಾರಿಗಳ ಹೆಸರು ಮತ್ತು ಕಛೇರಿ ವಿಳಾಸ ಶ್ರೀಮತಿ /ಶ್ರೀ | ಬಡ್ತಿ ಪಡೆದ ಪದನಾಮ/ ಕಛೇರಿ ಹೆಸರು ಮತ್ತು ವಿಳಾಸ |
|---|---|---|---|
| 01. | 224 | ಎಂ.ಎಲ್. ಶ್ರೀನಿವಾಸ ಮೂರ್ತಿ,<br>ಪತ್ರಾಂಕಿತ ವ್ಯವಸ್ಥಾಪಕರು,<br>ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ,<br>ಬೆಂಗಳೂರು. | ಪತ್ರಾಂಕಿತ ಸಹಾಯಕರು,<br>ಉಪ ನಿರ್ದೇಶಕರ ಕಛೇರಿ,<br>ಸಾರ್ವಜನಿಕ ಶಿಕ್ಷಣ ಇಲಾಖೆ,<br>ಹಾಸನ ಜಿಲ್ಲೆ. |

..ಮು.ತಿ.ನೋ

ಷರತ್ತುಗಳು :

01. ಮೇಲ್ಕಂಡ ಪತ್ರಾಂಕಿತ ಸಹಾಯಕ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ ಪತ್ರಾಂಕಿತ ಸಹಾಯಕ ಹುದ್ದೆಯಲ್ಲಿ ಕ. ನಾ. ಸೇ. ನಿಯಮ 42[ಬಿ] ಅನ್ವಯ ವೇತನ ನಿಗಧಿಗೆ ಅರ್ಹರಿರುತ್ತಾರೆ.
02. ಈ ಅಧಿಕಾರಿಗಳ ಮೇಲೆ ಶಿಸ್ತು ಪ್ರಕರಣ, ಇಲಾಖಾ ವಿಚಾರಣೆ, ನ್ಯಾಯಾಂಗ ಪ್ರಕರಣ ಬಾಕಿ ಇರುವಂತಿಲ್ಲ. ಅಲ್ಲದೆ ಸರ್ಕಾರಿ ನೌಕರನ ವಿರುದ್ಧ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ಪ್ರಾರಂಭವಾಗಿ ಅಂತಹ ಇಲಾಖಾ ವಿಚಾರಣೆ ಅಥವಾ ಕ್ರಿಮಿನಲ್ ಮೊಕದ್ದಮೆ ದಂಡನೆಯಲ್ಲಿ ಪರ್ಯಾವಸಾನಗೊಂಡಿದ್ದಲ್ಲಿ, ಆ ದಂಡನೆಯು ಜಾರಿಯಲ್ಲಿರುವ ಅವಧಿಯಲ್ಲಿ ಅಂತಹ ಸರ್ಕಾರಿ ನೌಕರರಿಗೆ ಮುಂಬಡ್ತಿ ಹೊಂದಲು ಆಸ್ಪದವಿಲ್ಲವೆಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ. ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರ ಹುದ್ದೆಯಿಂದ ಬಿಡುಗಡೆ ಮಾಡುವ ಮುನ್ನ, ಇದನ್ನು ಖಚಿತಪಡಿಸಿಕೊಳ್ಳುವುದು.
03. ಸ್ಥಳ ಆಯ್ಕೆ ಪ್ರಕ್ರಿಯೆಯಲ್ಲಿ ಸ್ವತ: ಭಾಗವಹಿಸಿ ಸ್ಥಳ ಆಯ್ಕೆ ಮಾಡಿಕೊಂಡಿರುವುದರಿಂದ, ಸ್ಥಳ ಬದಲಾವಣೆಗೆ ಅವಕಾಶವಿರುವುದಿಲ್ಲ.
04. ಈ ಆದೇಶ ಹೊರಡಿಸಿದ 15 ದಿನದೊಳಗೆ ಕರ್ತವ್ಯದಿಂದ ಬಿಡುಗಡೆ ಹೊಂದಿ/ಸೇರ್ಪಡೆಗೊಳ್ಳುವುದು. ತಪ್ಪಿದಲ್ಲಿ ಈ ಆದೇಶ ತಂತಾನೇ ರದ್ದಾಗುತ್ತದೆ.
05. ಕಛೇರಿ ಮುಖ್ಯಸ್ಥರುಗಳು ಸಂಬಂಧಿಸಿದ ನೌಕರರನ್ನು ಸಕಾಲದಲ್ಲಿ ಕರ್ತವ್ಯದಿಂದ ಬಿಡುಗಡೆಗೊಳಿಸುವುದು.
06. ನೌಕರರು ಸ್ಥಳನಿಯುಕ್ತಿಯನ್ನು ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಿ ಪಡೆದಿರುವುದರಿಂದ ಯಾವುದೇ ಪ್ರಯಾಣ ಭತ್ಯೆ, ವರ್ಗಾವಣೆ ಭತ್ಯೆ ಅಥವಾ ಸೇರಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
07. ಅಧಿಕಾರಿಗಳು ಬಿಡುಗಡೆ ಮತ್ತು ಸೇರ್ಪಡೆ ಬಗ್ಗೆ ತಪ್ಪದೆ ಈ ಕಛೇರಿಗೆ ವರದಿ ಸಲ್ಲಿಸುವುದು.
08. ಮೇಲಿನ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಈ ಷರತ್ತುಗಳು ಪೂರೈಕೆ ಆಗದಿದ್ದಂತಹ ಅಧಿಕಾರಿಗಳನ್ನು ಸ್ಥಾನಾಪನ್ನ ಬಡ್ತಿಗೆ ಪರಿಗಣಿಸಬಾರದೆಂದು ಸ್ಪಷ್ಟಪಡಿಸಿದೆ.

ವಿ.ಅನ್ಬುಕುಮಾರ್.ಭಾ.ಆ.ಸೇ.,
ಆಯುಕ್ತರು.

ಇವರಿಗೆ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3. ರಾಜ್ಯ ಮುಖ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
4. ರಾಜ್ಯ ಮಾಹಿತಿ ಆಯುಕ್ತರು, ಕರ್ನಾಟಕ ಮಾಹಿತಿ ಆಯೋಗ, ಮಾಹಿತಿ ಸೌಧ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಹಾಸನ ಜಿಲ್ಲೆ.
6. ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
7. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರ ಕಛೇರಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಡಿ.ಸುಬ್ಬಯ್ಯ ರಸ್ತೆ, ಮೈಸೂರು-24
8. ಉಪ ನಿರ್ದೇಶಕರು, [ಆಡಳಿತ] ಸಾರ್ವಜನಿಕ ಶಿಕ್ಷಣ ಇಲಾಖೆ, ಹಾಸನ ಜಿಲ್ಲೆ.
9. ವಿಶೇಷಾಧಿಕಾರಿಗಳು, ಕರ್ನಾಟಕ ರಾಜ್ಯ ಶಿಕ್ಷಕರ ಕಲ್ಯಾಣ ನಿಧಿ, ಕೆ.ಜಿ.ರಸ್ತೆ, ಬೆಂಗಳೂರು.
10. ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್-www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
11. ಕಛೇರಿ ಪ್ರತಿ.